# ₹8071 ಕೋಟಿ ಪರಿಹಾರ ಕೋರಿ ಕೇಂದ್ರ ತಂಡಕ್ಕೆ ಬಿಎಸ್‌ವೈ ಮನವಿ

ಉವಾ 8/9/20

ಬೆಂಗಳೂರು: ರಾಜ್ಯದಲ್ಲಿ ನೆರೆ ಹಾನಿ ಅಧ್ಯಯನಕ್ಕಾಗಿ ಭೇಟಿ ನೀಡಿರುವ ಕೇಂದ್ರ ತಂಡಕ್ಕೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ನೆರೆಯಿಂದ 8071 ಕೋಟಿ ರೂ. ನಷ್ಟವಾಗಿದೆ ಎಂಬುದಾಗಿ ಮಾಹಿತಿ ನೀಡಿದ್ದಾರೆ.

ಜತೆಗೆ ರಾಜ್ಯ ವಿಕೋಪ ಪರಿಹಾರ ನಿಧಿ/ ರಾಷ್ಟ್ರೀಯ ವಿಕೋಪ ಪರಿಹಾರ ನಿಧಿಯಡಿ ನೆರವು ನೀಡುವ ಮಾರ್ಗಸೂಚಿಗಳನ್ನು ಕೂಡಲೇ ಪರಿಷ್ಕರಿಸಬೇಕು ಎಂದು ಮನವಿ ಮಾಡಿದ ಯಡಿಯೂರಪ್ಪ ಅವರು ನೆರೆಯಿಂದ ಸಂಕಷ್ಟದಲ್ಲಿರುವ ಜನರ ನೆರವಿಗಾಗಿ ಹೆಚ್ಚಿನ ಹಣ ಬಿಡುಗಡೆ ಮಾಡುವಂತೆ ಕೋರಿದರು.

ರಾಜ್ಯಕ್ಕೆ ಸೋಮವಾರ ಆಗಮಿಸಿರುವ ಕೇಂದ್ರ ಗೃಹ ಸಚಿವಾಲಯದ ಜಂಟಿ ಕಾರ್ಯದರ್ಶಿ ಕೆ.ವಿ. ಪ್ರತಾಪ್ ನೇತೃತ್ವದ ಆರು ಮಂದಿಯ ಕೇಂದ್ರ ಅಧ್ಯಯನ ತಂಡ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಸಂಜೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಭೇಟಿಯಾಗಿತ್ತು. ಈ ಸಂದರ್ಭದಲ್ಲಿ ನೆರೆಯಿಂದ ಉಂಟಾಗಿರುವ ಹಾನಿ ಬಗ್ಗೆ ಯಡಿಯೂರಪ್ಪ ಅವರು ಕೇಂದ್ರ ತಂಡದೊಂದಿಗೆ ಚರ್ಚಿಸಿ ನೆರೆಯಿಂದಾಗಿ 8071 ಕೋಟಿ ರೂ. ನಷ್ಟ ಉಂಟಾಗಿದೆ ಎಂದು ಮಾಹಿತಿ ನೀಡಿದರು.

ಈ ಹಿಂದೆ ಅಂದರೆ 2018, 2019ರಲ್ಲಿಯೂ ರಾಜ್ಯದಲ್ಲಿ ನೆರೆ, ಭೂ ಕುಸಿತ ಉಂಟಾಗಿ 22 ಜಿಲ್ಲೆಗಳ ಜನ ಸಂಕಷ್ಟಕ್ಕೆ ಸಿಲುಕಿದ್ದರು. ಈ ಬಾರಿಯ ಪ್ರವಾಹದಲ್ಲಿ 4.03 ಲಕ್ಷ ಹೆಕ್ಟೇರ್ ಪ್ರದೇಶದ ಕೃಷಿ, ತೋಟಗಾರಿಕೆ ಬೆಳೆ ಹಾನಿಯಾಗಿದೆ ಎಂದು ಯಡಿಯೂರಪ್ಪ ತಂಡಕ್ಕೆ ವಿವರ ನೀಡಿದರು.

ಕೇಂದ್ರ ಸರ್ಕಾರ ರಾಜ್ಯ ವಿಕೋಪ ಅಪಾಯ ನಿರ್ವಹಣಾ ನಿಧಿಯಡಿ ನಾಲ್ಕು ಪ್ರತ್ಯೇಕ ನಿಧಿ ಗವಾಕ್ಷಿಗಳನ್ನು ಸೃಜಿಸಿದೆ. ಆದರೆ ಕೋವಿಡ್- 19 ಕಾರಣದಿಂದಾಗಿ ರಾಜ್ಯ ಸರ್ಕಾರದ ಪ್ರಯತ್ನಗಳಿಗೆ ಅಡ್ಡಿಯಾಗಿದೆ. ಕರ್ನಾಟಕ ರಾಜ್ಯ ಪ್ರಕೃತಿ ವಿಕೋಪ ಪ್ರಾಧಿಕಾರವು ರಾಜ್ಯ ವಿಕೋಪ ನಿರ್ವಹಣಾ ಯೋಜನೆ 2020ನ್ನು ಅನುಮೋದಿಸಿದ್ದು ಯೋಜನೆಯು ಅಲ್ಪಾವಧಿ, ಮಧ್ಯಮಾವಧಿ ಹಾಗೂ ದೀರ್ಘಾವಧಿ ಪುನರ್ ನಿರ್ಮಾಣ ಯೋಜನೆ ಹೊಂದಿದೆ ಎಂದು ವಿವರ ನೀಡಿದರು.

**ಹೆಚ್ಚಿನ ಅನುದಾನದ ಅಗತ್ಯವಿದೆ:** ಕೋವಿಡ್-19 ನಿಯಂತ್ರಣ ಮತ್ತು ನೆರೆ ನಿರ್ವಹಣೆಗಾಗಿ ರಾಜ್ಯ ವಿಕೋಪ ಪರಿಹಾರ ನಿಧಿಯಡಿ 60 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ರಾಜ್ಯದಲ್ಲಿ ಕೊರೋನಾ ಪ್ರಕರಣಗಳ ಹೆಚ್ಚಳ, ಪ್ರವಾಹ ಪರಿಸ್ಥಿತಿ ನಿಭಾಯಿಸಲು ಹೆಚ್ಚಿನ ಮೊತ್ತದ ಅಗತ್ಯವಿದೆ ಎಂದು ಕೇಂದ್ರ ತಂಡಕ್ಕೆ ತಿಳಿಸಿದರು.

ರಾಜ್ಯ ಹಾಗೂ ರಾಷ್ಟ್ರೀಯ ವಿಕೋಪ ಪರಿಹಾರ ನಿಧಿಯಡಿ ನೆರವು ನೀಡುವ ಮಾರ್ಗಸೂಚಿಗಳನ್ನು ಈ ವರ್ಷವೇ ಪರಿಷ್ಕರಿಸಬೇಕಿದೆ. ಕೂಡಲೇ ಮಾರ್ಗಸೂಚಿಗಳ ಪರಿಷ್ಕರಣೆಗೆ ಕೇಂದ್ರ ಸರ್ಕಾರ ಕ್ರಮ ವಹಿಸಬೇಕು. ಸಂಕಷ್ಟದಲ್ಲಿರುವ ಜನರ ನೆರವಿಗಾಗಿ ಹೆಚ್ಚಿನ ಮೊತ್ತ ಬಿಡುಗಡೆ ಮಾಡಬೇಕು ಎಂದು ಮನವಿ ಸಲ್ಲಿಸಿದರು.

## ಇಂದು ಅಧ್ಯಯನ ಎಲ್ಲಿ?

ಕೇಂದ್ರ ಅಧ್ಯಯನ ತಂಡ ಮೂರು ಪ್ರತ್ಯೇಕ ಗುಂಪುಗಳಾಗಿ ನೆರೆ ಪ್ರದೇಶಗಳಿಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ. ಒಂದು ತಂಡ ಕೊಡಗು ಜಿಲ್ಲೆ, ಎರಡನೇ ತಂಡ ಬೆಳಗಾವಿ, ಧಾರವಾಡಕ್ಕೆ ಹಾಗೂ ಮೂರನೇ ತಂಡ ಬಾಗಲಕೋಟೆ, ಗದಗ ಭಾಗದಲ್ಲಿ ಅಧ್ಯಯನ ನಡೆಸಲಿದೆ. ಬುಧವಾರ ಮಧ್ಯಾಹ್ನ ಬೆಂಗಳೂರಿಗೆ ಹಿಂತಿರುಗಲಿರುವ ತಂಡಗಳು ಮತ್ತೊಮ್ಮೆ ಮುಖ್ಯಮಂತ್ರಿಗಳೊಂದಿಗೆ ಸಭೆ ನಡೆಸಲಿವೆ.




'ಉದಯವಾಣಿ' ಆ. 13ರಂದು ವಿಶೇಷ ವರದಿ ಪ್ರಕಟಿಸಿತ್ತು.